ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 847
ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ
ಉತ್ತರಿಸುವ ದಿನಾಂಕ : 15-12-2020
ಉತ್ತರಿಸುವ ಸಚಿವರು : ಸಹಕಾರ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಕಲ್ಯಾಣ ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಸಹಕಾರ ಇಲಾಖೆಗೆ ಮಂಜೂರಾಗಿದ 434 ಹುದ್ದೆಗಳಲ್ಲಿ 205 ಹುದ್ದೆಗಳು ಭರ್ತಿಯಾಗಿದ್ದು ಇನ್ನೂಳಿದ 240 ಹುದ್ದೆಗಳು ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಯಾವಾಗ?	ಬಂದಿದೆ. ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ:06-07-2020 ರಲ್ಲಿ 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿರುತ್ತದೆ. ಆದ್ದರಿಂದ, ಆರ್ಥಿಕ ಇಲಾಖೆಯಿಂದ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ದೊರೆತ ನಂತರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು. ಮುಂಬಡ್ತಿಯಿಂದ ಭರ್ತಿ ಮಾಡಬೇಕಾದ ಖಾಲಿ ಹುದ್ದೆಗಳನ್ನು ಕಾಲಕಾಲಕ್ಕೆ ಅರ್ಹ ಅಭ್ಯರ್ಥಿಗಳಿಗೆ ಬಡ್ತಿ ನೀಡಿ ತುಂಬಲಾಗುತ್ತಿದೆ.

ಸಂಖ್ಯೆ: ಸಿಒ 313 ಇಸಿಎ 2020

(ಎಸ್.ಟಿ.ಸೋಮಶೇಖರ್)
ಸಹಕಾರ ಸಚಿವರು